ಮಂಗಳವಾರ 06.01.2026
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 112
Digital Varthe Kannada Daily
Volume 01 - Issue 112
Tuesday 06.01.2026
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ

ಕನ್ನಡ ದಿನಪತ್ರಿಕೆ

DIGITAL VARTHE
digitalvarthe@gmail.com
www.digitalvarthe.com

## ಅಖಿಲೇಶ್ ಯಾದವ್ ಅವರನ್ನು ಭೇಟಿ ಮಾಡಿದ ಕರ್ನಾಟಕ ಪುರುಷ ಸಮಿತಿಯ ನಿಯೋಗ

### ಪುರುಷ ಆಯೋಗ ರಚನೆ ಅಗತ್ಯತೆ ಕುರಿತು ಮಹತ್ವದ ಚರ್ಚೆ



**ಬೆಂಗಳೂರು/ಲಕ್ನೋ:** ಉತ್ತರ ಪ್ರದೇಶದ ಮಾಜಿ ಮುಖ್ಯಮಂತ್ರಿ ಹಾಗೂ ಸಮಾಜವಾದಿ ಪಕ್ಷದ ನಾಯಕ ಅಖಿಲೇಶ್ ಯಾದವ್ ಅವರನ್ನು ಕರ್ನಾಟಕದಿಂದ ತೆರಳಿದ ಪುರುಷ ಸಮಿತಿಯ ನಿಯೋಗ ಇಂದು ಭೇಟಿ ಮಾಡಿ, ಕರ್ನಾಟಕ ರಾಜ್ಯದಲ್ಲಿ ಸ್ವತಂತ್ರ ಪುರುಷ ಆಯೋಗ ರಚನೆಯ ಅಗತ್ಯತೆ ಕುರಿತು ಮಹತ್ವದ ಚರ್ಚೆ ನಡೆಸಿತು.

ಈ ನಿಯೋಗದಲ್ಲಿ ಕರ್ನಾಟಕ ರಾಜ್ಯ ಪುರುಷರ ಕಲ್ಯಾಣ ಮತ್ತು ರಕ್ಷಣಾ ಸಮಿತಿಯ ರಾಜ್ಯ ಅಧ್ಯಕ್ಷರು ಹಾಗೂ ರಾಜ್ಯ ಪ್ರಶಸ್ತಿ ವಿಜೇತರಾದ ಆನಂದ್ ಸಿ. ತಿರುಮಲ, ಪ್ರಧಾನ ಕಾರ್ಯದರ್ಶಿ ರಂಗನಾಥ್ ಎಲ್. ಪಾತ್ರೋಟಿ ಸೇರಿದಂತೆ ಇತರ ಸದಸ್ಯರು ಭಾಗವಹಿಸಿದ್ದರು.

ಭೇಟಿಯ ವೇಳೆ ಆನಂದ್ ಸಿ. ತಿರುಮಲ ಅವರು, ರಾಜ್ಯದಲ್ಲಿ ಪುರುಷರು ಎದುರಿಸುತ್ತಿರುವ ಕಾನೂನು, ಸಾಮಾಜಿಕ ಹಾಗೂ ಮಾನಸಿಕ ಸಮಸ್ಯೆಗಳ ಕುರಿತು ವಿವರಿಸಿ, ಅವುಗಳಿಗೆ ಸಮಗ್ರ ಪರಿಹಾರ ಒದಗಿಸುವ ಉದ್ದೇಶದಿಂದ ಸ್ವತಂತ್ರ ಪುರುಷ ಆಯೋಗ ಸ್ಥಾಪನೆ ಅನಿವಾರ್ಯವೆಂದು ಮನವಿ ಸಲ್ಲಿಸಿದರು.


ಪ್ರಧಾನ ಕಾರ್ಯದರ್ಶಿ ರಂಗನಾಥ್ ಎಲ್. ಪಾತ್ರೋಟಿ ಅವರು, ಪುರುಷರ ಹಕ್ಕುಗಳ ರಕ್ಷಣೆ, ಕುಟುಂಬ ನ್ಯಾಯ, ಸುಳ್ಳು ಪ್ರಕರಣಗಳಿಂದ ರಕ್ಷಣೆ ಹಾಗೂ ಸಮಾಜದಲ್ಲಿ ಸಮತೋಲನ ಕಾಯ್ದುಕೊಳ್ಳುವಲ್ಲಿ ಪ್ರಸ್ತಾವಿತ ಆಯೋಗದ ಪಾತ್ರದ ಬಗ್ಗೆ ವಿವರಿಸಿದರು.

ನಿಯೋಗದ ಮಾತುಗಳನ್ನು ಗಮನಪೂರ್ವಕವಾಗಿ ಆಲಿಸಿದ ಅಖಿಲೇಶ್ ಯಾದವ್ ಅವರು, ಸಾಮಾಜಿಕ ನ್ಯಾಯ ಮತ್ತು ಸಮಾನತೆಯ ದೃಷ್ಟಿಯಿಂದ ಈ ವಿಷಯ ಗಂಭೀರವಾಗಿದ್ದು, ಚರ್ಚೆಗೆ ಅರ್ಹವಾಗಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಈ ಭೇಟಿಯನ್ನು ಕರ್ನಾಟಕದಲ್ಲಿ ಪುರುಷ ಆಯೋಗ ರಚನೆಗೆ ಸಂಬಂಧಿಸಿದ ಹೋರಾಟಕ್ಕೆ ರಾಷ್ಟ್ರಮಟ್ಟದ ಸ್ಪಂದನೆ ದೊರಕುವ ಮಹತ್ವದ ಹೆಜ್ಜೆಯಾಗಿ ಸಂಘಟನೆಯ ಮುಖಂಡರು ಅಭಿಪ್ರಾಯಪಟ್ಟರು.

## ನಿಧಿಗಾಗಿ ಮಗು ಬಲಿ ಪೂಜೆ ಆರೋಪ: ದಾಳಿ

### 08 ತಿಂಗಳ ಗಂಡು ಮಗುವನ್ನು ರಕ್ಷಿಸಿದ ಅಧಿಕಾರಿಗಳು, ತನಿಖೆ



**ಹೊಸಕೋಟೆ:** ನಿಧಿಗಾಗಿ ದತ್ತು ಪಡೆದ ಮಗುವನ್ನು ಬಲಿ ಪೂಜೆ ಮಾಡಲು ಯತ್ನಿಸಿದ್ದಾರೆಯೆಂಬ ಗಂಭೀರ ಆರೋಪದಡಿ, ಅಧಿಕಾರಿಗಳು ದಾಳಿ ನಡೆಸಿ 08 ತಿಂಗಳ ಗಂಡು ಮಗುವನ್ನು ರಕ್ಷಿಸಿರುವ ಘಟನೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆ ತಾಲೂಕಿನ ಸೂಲಿಬೆಲೆ ಗ್ರಾಮದಲ್ಲಿ ನಡೆದಿದೆ.

ಸೂಲಿಬೆಲೆಯ ಜನತಾ ಕಾಲೊನಿಯಲ್ಲಿರುವ ಸೈಯದ್ ಇಮ್ರಾನ್ ಎಂಬುವವರ ಮನೆಯಲ್ಲಿ, ನಿಧಿಗಾಗಿ ಮಗು ಬಲಿ ಪೂಜೆ ಮಾಡಲಾಗುತ್ತಿದೆ ಎಂಬ ಆರೋಪ ಕೇಳಿಬಂದಿತ್ತು. ಈ ಹಿನ್ನೆಲೆ ಅಪರಿಚಿತರಿಂದ ಮಕ್ಕಳ ಸಹಾಯವಾಣಿಗೆ ಕರೆ ಬಂದಿದ್ದು, ಮಾಹಿತಿ ಆಧರಿಸಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ಮಕ್ಕಳ ಸಹಾಯವಾಣಿ ಅಧಿಕಾರಿಗಳು ತಕ್ಷಣ ದಾಳಿ ನಡೆಸಿದರು.

ಸ್ಥಳ ಪರಿಶೀಲನೆ ವೇಳೆ ಮನೆಯೊಳಗಿನ ಕೋಣೆಯಲ್ಲಿ ಗುಂಡಿ ತೆಗೆದು ಪೂಜೆ ಮಾಡಿರುವುದು ಪತ್ತೆಯಾಗಿದ್ದು, ಬಲಿ ಪೂಜೆ ನಡೆಸುವ ಉದ್ದೇಶವಿತ್ತು ಎಂಬ ಶಂಕೆ ಮತ್ತಷ್ಟು ಗಟ್ಟಿಯಾಗಿದೆ. ಈ ಹಿನ್ನೆಲೆಯಲ್ಲಿ 08 ತಿಂಗಳ ಗಂಡು ಮಗುವನ್ನು ಅಧಿಕಾರಿಗಳು ವಶಕ್ಕೆ ಪಡೆದು ಶಿಶು ಕೇಂದ್ರಕ್ಕೆ ರವಾನಿಸಿದ್ದಾರೆ.

ಆರೋಪಿಗಳು ಸುಮಾರು 08 ತಿಂಗಳ ಹಿಂದೆ ಬೇರೆಯವರಿಂದ ಮಗುವನ್ನು ಖರೀದಿಸಿದ್ದಾರೆಯೆಂಬ ಆರೋಪವೂ ಕೇಳಿಬಂದಿದ್ದು, ಈ ಕುರಿತು ಮಕ್ಕಳ ಕಲ್ಯಾಣ ಮತ್ತು ರಕ್ಷಣಾ ಸಮಿತಿಯು ಪ್ರತ್ಯೇಕ ತನಿಖೆ ಕೈಗೊಂಡಿದೆ.

ಘಟನೆ ಸೂಲಿಬೆಲೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದ್ದು, ಪೊಲೀಸರು ಹಾಗೂ ಮಕ್ಕಳ ರಕ್ಷಣಾ ಅಧಿಕಾರಿಗಳು ಎಲ್ಲಾ ಆಯಾಮಗಳಿಂದ ತನಿಖೆ ಮುಂದುವರಿಸಿದ್ದಾರೆ.



ನೆಲಮಂಗಲ ತಾಲೂಕು ತ್ಯಾಮಗೊಂಡ್ಲು ಹೋಬಳಿ ಹಸಿರುವಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದ ನೂತನ ಕಟ್ಟಡಕ್ಕೆ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ 2 ಲಕ್ಷ ರುಪಾಯಿಗಳ ಸಹಾಯಧನದ ಆದೇಶ ಪತ್ರ ನೀಡಲಾಯಿತು.

## ನೋಯ್ಡಾ ಏರ್‌ಪೋರ್ಟ್‌ಗೆ ರನ್‌ವೇ ಸ್ವಚ್ಛತಾ ವಾಹನ ಹಸ್ತಾಂತರಿಸಿದ ಸಚಿವ ಎಂ.ಬಿ. ಪಾಟೀಲ



### ದೇಶದ ಮೊದಲ ದೇಶೀಯ ತಯಾರಿಕೆಯ ರನ್ ವೇ ಕ್ಲೀನಿಂಗ್ ವೆಹಿಕಲ್

**ಬೆಂಗಳೂರು:** ಎಂಜಿನಿಯರಿಂಗ್ ನಾವೀನ್ಯತೆ ಮತ್ತು ಅಧಿಕ ಮೌಲ್ಯದ ಮೂಲಸೌಕರ್ಯ ಉಪಕರಣಗಳ ತಯಾರಿಕೆಯಲ್ಲಿ ತೊಡಗಿರುವ ಬೆಂಗಳೂರು ಮೂಲದ ಆನ್ ಲಾನ್ ಟೆಕ್ನಾಲಜಿ ಸಲ್ಯೂಷನ್ಸ್ ಲಿಮಿಟೆಡ್ ಅಭಿವೃದ್ಧಿಪಡಿಸಿರುವ ವಿಮಾನ ನಿಲ್ದಾಣ ರನ್ ವೇ ಸ್ವಚ್ಛತಾ ವಾಹನವನ್ನು ಭಾರಿ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ ಅವರು ಸೋಮವಾರ ನೋಯ್ಡಾ ಇಂಟರ್ ನ್ಯಾಷನಲ್ ಏರ್ ಪೋರ್ಟ್ ಲಿಮಿಟೆಡ್ ಗೆ (ಎನ್.ಐ.ಎ.ಎಲ್) ಹಸ್ತಾಂತರಿಸಿದರು.

ಭಾರತದಲ್ಲಿ ಮೊದಲ ಬಾರಿಗೆ ದೇಶೀಯವಾಗಿ ತಯಾರಿಕೆಯಾದ ರನ್ ವೇ ಸ್ವಚ್ಛತಾ ವಾಹನ ಇದಾಗಿದೆ. ಭಾರತದ ಸರ್ಕಾರದ 'ಮೇಕ್ ಇನ್ ಇಂಡಿಯಾ' ಉಪಕ್ರಮದಡಿ ಸ್ವಿಟ್ಜರ್ ಲೆಂಡ್ ನ ಮೆಸರ್ಸ್ ಬುಕರ್ ಮುನಿಸಿಪಲ್ ಸಹಯೋಗದಲ್ಲಿ ದೊಡ್ಡಬಳ್ಳಾಪುರದ ಆದಿನಾರಾಯಣ ಹೊಸಹಳ್ಳಿಯ ಕೈಗಾರಿಕಾ ಪ್ರದೇಶದಲ್ಲಿರುವ ಘಟಕದಲ್ಲಿ ಜೋಡಣೆಗೊಂಡು ತಯಾರಾಗಿರುವ ಈ ಮಾದರಿಯ ಎರಡು ವಾಹನಗಳ ಕೀಲಿಕೈಗಳನ್ನು ನೋಯ್ಡಾ ವಿಮಾನ ನಿಲ್ದಾಣದ ಪ್ರತಿನಿಧಿ ಪ್ರದೀಪ್ ರಾಣಾ ಅವರಿಗೆ ನೀಡಿದರು. ವಿಮಾನದ ಟಯರ್ ಗಳಿಗೆ ಅಪಾಯಕಾರಿಯಾಗಬಹುದಾದ ಮೊಳೆಗಳು ಹಾಗೂ ಚೂಪಾದ ಲೋಹದ ತುಣುಕುಗಳನ್ನು ರನ್ ವೇ ಮೇಲಿಂದ ತೆರವುಗೊಳಿಸುವ ಕಾರ್ಯವನ್ನು ಈ ವಾಹನ ಮಾಡಲಿದೆ. ದೂಳನ್ನೂ ಹೀರಿಕೊಳ್ಳಲಿದೆ.

ಮುಖ್ಯವಾಗಿ ವಿಮಾನಗಳು ಇಳಿಯುವಾಗ ರನ್ ವೇಯಲ್ಲಿ ಜಾರುವ ಸಾಧ್ಯತೆ ತಂದೊಡ್ಡಬಹುದಾದ ಪಾಚಿಯನ್ನು ತೆಗೆದುಹಾಕುವ ಕಾರ್ಯವನ್ನು ಇದು ನಿರ್ವಹಿಸಲಿದೆ. ನಗರದ ರಸ್ತೆಗಳನ್ನು ಸ್ವಚ್ಛ ಮಾಡುವ ಸ್ವೀಪಿಂಗ್ ಮಿಷಿನ್ ವಾಹನಗಳ ತಯಾರಿಕೆಗೂ ಗಮನ ಕೇಂದ್ರೀಕರಿಸಿರುವ ಆನ್ ಲಾನ್ ನಂತಹ ಕಂಪನಿಗಳು ನಮ್ಮ ಪೂರೈಕೆ ಸರಪಳಿಯ ಬುನಾದಿಯಾಗಿವೆ. ಆನ್ ಲಾನ್ ಕಂಪನಿಯು ಸರ್ಕಾರದ ನೀತಿಗಳು ಹಾಗೂ ಕಾರ್ಯಪರಿಸರವನ್ನು ಬಳಸಿಕೊಂಡು ಈಗ ತಯಾರಿಸಿರುವ ವಾಹನಕ್ಕೆ ರಫ್ತು ಮಾರುಕಟ್ಟೆಗಳನ್ನು ಶೋಧಿಸಿಕೊಳ್ಳಬೇಕು.


ನಮ್ಮ ಕೈಗಾರಿಕಾ ನೀತಿಯು (2025-30) ಗುರಿ ನಿರ್ದೇಶಿತ ಬೆಂಬಲ ಹಾಗೂ ಗುಣಮಟ್ಟ ಪ್ರಮಾಣಪತ್ರ ಪ್ರೋತ್ಸಾಹಕ ಕ್ರಮಗಳ ಮೂಲಕ ಆನ್ ಲಾನ್ ನಂತಹ ಕಂಪನಿಗಳಿಗೆ ಉತ್ತೇಜನ ನೀಡುತ್ತದೆ ಎಂದರು. ಕಾರ್ಯಕ್ರಮದ ನಂತರದ ಸುದ್ದಿಗಾರರ ಪ್ರಶ್ನೆಗಳಿಗೆ ಉತ್ತರಿಸಿದ ಸಚಿವರು ಫಾಕ್ಸ್ ಕಾನ್ ಕಂಪನಿಯು ಸದ್ಯ 30,000 ಜನರಿಗೆ ಉದ್ಯೋಗ ನೀಡಿದ್ದು, ಇದರಲ್ಲಿ ಶೇ 80ರಷ್ಟು ಮಂದಿ ಮಹಿಳೆಯರೇ ಇರುವುದು ಸಂತಸದ ಸಂಗತಿ.

ಇದೇ ರೀತಿ ಮುಂದಿನ ದಿನಗಳಲ್ಲಿ ಇನ್ನೂ 20 ಸಾವಿರ ಉದ್ಯೋಗ ಸೃಷ್ಟಿಯಾಗಲಿದೆ. ಚೀನಾ ಮತ್ತು ವಿಯೆಟ್ನಾಂ ರೀತಿ ತಯಾರಿಕಾ ವಲಯದಲ್ಲಿ ಮುಂಚೂಣಿಗೆ ತರುವ ನಿಟ್ಟಿನಲ್ಲಿ ಕೆಲಸ ನಡೆಯುತ್ತಿದೆ ಎಂದು ತಿಳಿಸಿದರು. ಕಾರ್ಯಕ್ರಮದ ನಂತರದ ಸ್ಥಳೀಯ ಉದ್ಯಮಿಗಳ ಜತೆಗೂ ಸಚಿವರು ಮಾತನಾಡಿದರು. ಕೆಲವರು ತಮ್ಮ ಉದ್ಯಮ ವಿಸ್ತರಿಸಲು ಭೂಮಿ ಕೇಳುತ್ತಿದ್ದು, ಇದನ್ನು ಲಭ್ಯವಾಗಿಸಲಾಗುವುದು ಎಂದು ಭರವಸೆ ನೀಡಿದರು. ಕಂಪನಿಯ ವ್ಯವಸ್ಥಾಪಕ ನಿರ್ದೇಶಕ ಉನ್ನಿಕೃಷ್ಣನ್ ನಾಯರ್ ಪಿ.ಎಂ ಮಾತನಾಡಿದರು. ಮಾಜಿ ಶಾಸಕ ವೆಂಕಟರಮಣ, ಲೆಕ್ಕಪರಿಶೋಧಕ ಜಿ.ಜಿ.ಪಾಟೀಲ, ನೋಯ್ಡಾ ವಿಮಾನ ನಿಲ್ದಾಣದ ಲೀಡ್ ಗ್ರೌಂಡ್ ವಿನೋದ್ ಮತ್ತಿತರರು ಈ ಸಂದರ್ಭದಲ್ಲಿ ಇದ್ದರು.

## ಕರ್ನಾಟಕವನ್ನು ಬಾಂಗ್ಲಾದೇಶ ಮಾಡಲು ಕಾಂಗ್ರೆಸ್ ಕುಮ್ಮಕ್ಕು: ಬಿ.ವೈ ವಿಜಯೇಂದ್ರ

**ಬೆಂಗಳೂರು:** ಕಾಂಗ್ರೆಸ್ ಕಾರ್ಯಕರ್ತರು ಲಂಚ ಪಡೆದು ಕರ್ನಾಟಕವನ್ನು ಬಾಂಗ್ಲಾದೇಶ ಮಾಡಲು ಕುಮ್ಮಕ್ಕು ಕೊಡುತ್ತಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ಟೀಕಿಸಿದರು.

"ಕೋಗಿಲು ಉಳಿಸಿ ಅಕ್ರಮ ವಲಸಿಗರನ್ನು ತೊಲಗಿಸಿ" ಎನ್ನುವ ಘೋಷವಾಕ್ಯದೊಂದಿಗೆ ಇಂದು ಬಾಗಲೂರು ಮುಖ್ಯ ರಸ್ತೆಯ ಕೌಂಟ್ರಿ ಕ್ಲಬ್ ಹತ್ತಿರ ಬೃಹತ್ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿತ್ತು.



ಈ ಸಂದರ್ಭದಲ್ಲಿ ಮಾತನಾಡಿದ ಅವರು, ನಾವು ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿದ್ದೇವೆ. ಇಂಥ ಗೊಡ್ಡು ಬೆದರಿಕೆಗೆ ಹೆದರುವವರು ಬಿಜೆಪಿ ಕಾರ್ಯಕರ್ತರಲ್ಲ, ಇದನ್ನು ಸಿದ್ದರಾಮಯ್ಯ- ಡಿ.ಕೆ.ಶಿವಕುಮಾರ್ ಅವರು ಅರ್ಥ ಮಾಡಿಕೊಳ್ಳಲಿ ಎಂದು ತಿಳಿಸಿದರು.

ಮನೆ ಕೆಡವಿದ್ದೇ ಕಾಂಗ್ರೆಸ್ ಸರಕಾರ. ಆದರೆ, ಕೆ.ಸಿ.ವೇಣುಗೋಪಾಲ್ ಅವರು ಬೆದರಿಸಿದ ತಕ್ಷಣ ಸಿದ್ದರಾಮಯ್ಯನವರು ತಮ್ಮ ಸಿಎಂ ಕುರ್ಚಿ ಕಳಕೊಳ್ಳುವ ಭೀತಿಯಿಂದ ಅಕ್ರಮ ವಲಸಿಗರಿಗೆ ಮನೆ ಕೊಡಲು ರಾಜ್ಯ ಸರಕಾರ ಮುಂದಾಗಿದೆ. ಡಿ. ಕೆ.ಶಿವಕುಮಾರ್ ಅವರು ಮುಖ್ಯಮಂತ್ರಿ ಕುರ್ಚಿ ಕಸಿದುಕೊಳ್ಳಬೇಕೆಂಬ ಕಾರಣಕ್ಕಾಗಿ ಕೆ.ಸಿ. ವೇಣುಗೋಪಾಲ್ ಮೂಲಕ ಸಿಎಂಗೆ ಧಮ್ಕಿ ಹಾಕಿಸಿ ಅವರೂ ಅಕ್ರಮ ವಲಸಿಗರಿಗೆ ಮನೆ ಕೊಡಲು ಹೊರಟಿದ್ದಾರೆ ಎಂದು ಟೀಕಿಸಿದರು.

### 'ಲಂಚ ಪಡೆದು ಕರ್ನಾಟಕವನ್ನು ಬಾಂಗ್ಲಾದೇಶ ಮಾಡಲು ಯತ್ನ: ಬಿವೈ ವಿಜಯೇಂದ್ರ

ಕೆ.ಸಿ.ವೇಣುಗೋಪಾಲ್ ಕರ್ನಾಟಕದ ಮುಖ್ಯಮಂತ್ರಿಯೇ? ಅಥವಾ ಸಿದ್ದರಾಮಯ್ಯ ಮುಖ್ಯಮಂತ್ರಿಯೇ ಎಂದು ಕರ್ನಾಟಕದ ಜನರು ಪ್ರಶ್ನಿಸುತ್ತಿದ್ದಾರೆ ಎಂದು ನುಡಿದರು. ಹಿಂದೂಗಳಿಗೆ ಅಪಮಾನ ಮಾಡುತ್ತಿದ್ದಾರೆ. ರಾಜ್ಯದಲ್ಲಿ 38 ಲಕ್ಷ ಜನರು ಮನೆಗಾಗಿ ಅರ್ಜಿ ಹಾಕಿದ್ದಾರೆ. ಡಾ. ಅಂಬೇಡ್ಕರ್ ಅವರ ಹೆಸರು ಹೇಳುವ ಮುಖ್ಯಮಂತ್ರಿಗಳು ಕಳೆದ ಎರಡೂವರೆ ವರ್ಷದಲ್ಲಿ ಕಾಂಗ್ರೆಸ್ ಸರಕಾರವು ಒಂದೇ ಒಂದು ಮನೆ ಕೊಟ್ಟಿಲ್ಲ ಎಂದು ದೂರಿದರು.

ಅಕ್ರಮ ವಲಸಿಗರಿಗೆ ಮನೆ ಕೊಡಲು ಹೊರಟದ್ದು ಅಕ್ಷಮ್ಯ ಅಪರಾಧ ಎಂದು ಆಕ್ಷೇಪಿಸಿದರು. ಬಿಜೆಪಿ ಇದನ್ನು ಬಲವಾಗಿ ಖಂಡಿಸುತ್ತದೆ. ಇದರ ವಿರುದ್ಧ ರಾಜ್ಯಾದ್ಯಂತ ಪ್ರತಿಭಟನೆ ನಡೆಸುವುದಾಗಿ ಹೇಳಿದರು. ಕೋಗಿಲು ಅಕ್ರಮವಾಸಿಗಳಿಗೆ ಅಯೋಗ್ಯ ಕಾಂಗ್ರೆಸ್ ಕಾರ್ಯಕರ್ತರು ಮತ್ತು ಮುಖಂಡರು ನಲ್ಲಿ ನೀರಿನ ಸಂಪರ್ಕ, ವಿದ್ಯುತ್ ಸಂಪರ್ಕ ನೀಡಿದ್ದಾರೆ. ತಿಂಗಳಿಗೆ 2-3 ಲಕ್ಷ ಲಂಚ ವಸೂಲಿ ಮಾಡುತ್ತಿದ್ದರು ಎಂದು ಆಕ್ಷೇಪಿಸಿದರು. ಕಾಂಗ್ರೆಸ್ ಕಾರ್ಯಕರ್ತರು ಲಂಚ ಪಡೆದು ಕರ್ನಾಟಕವನ್ನು ಬಾಂಗ್ಲಾದೇಶ ಮಾಡಲು ಕುಮ್ಮಕ್ಕು ಕೊಡುತ್ತಿದ್ದಾರೆ ಎಂದು ಟೀಕಿಸಿದರು.

ಸಿದ್ದರಾಮಯ್ಯ- ಡಿ.ಕೆ. ಶಿವಕುಮಾರ್ ಅವರು ಮಾತೆತ್ತಿದರೆ ಡಾ.ಬಾಬಾಸಾಹೇಬ ಅಂಬೇಡ್ಕರ್ ಅವರ ಹೆಸರು ಹೇಳುತ್ತಾರೆ. ಇವರ ಅಂಥ ದಲಿತರಿಗೆ ಅನ್ಯಾಯ ಮಾಡಲು ಹೊರಟಿದ್ದಾರಲ್ಲವೇ ಎಂದು ಕೇಳಿದರು. ರಾಜ್ಯದ ತೆರಿಗೆದಾರರ ಹಣದಲ್ಲಿ ಕಟ್ಟಿದ ಮನೆಗಳನ್ನು ಅಕ್ರಮವಾಗಿ ನೆಲೆಸಿದವರಿಗೆ ಅಕ್ರಮವಾಗಿ ವಿತರಿಸಲು ರಾಜ್ಯ ಸರಕಾರ ಮುಂದಾಗಿದೆ ಎಂದು ದೂರಿದರು. ರಾಜ್ಯದಲ್ಲಿ ನಮ್ಮ ಹೋರಾಟ ನಡೆಯಲಿದೆ ಎಂದು ಪ್ರಕಟಿಸಿದರು. ಸತ್ಯಕ್ಕೆ ಜಯ ಸಿಗಲಿದೆ ಎಂದು ತಿಳಿಸಿದರು.

ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಮಾತನಾಡಿ, ಕೇರಳದವರು ಇಲ್ಲಿ ಬಂದು ವಿವರ ಪಡೆದು ಹೋಗಿದ್ದಾರೆ. ಅವರು ರಾಜ್ಯಕ್ಕೆ ಬಂದಾಗ ಇಲ್ಲಿ ಬರಲು ಅವಕಾಶ ನೀಡಿದ್ದು ಸರಿಯಲ್ಲ; ಅವರನ್ನು ಬಂಧಿಸಬೇಕಿತ್ತು ಎಂದು ತಿಳಿಸಿದರು. ಬಾಂಗ್ಲಾ ದೇಶದಿಂದ ಬಂದ ರೋಹಿಂಗ್ಯಾಗಳಿಗೆ ಮನೆ ಕೊಡಲು ನಿಮಗೆ ಅಧಿಕಾರ ಕೊಟ್ಟವರು ಯಾರು ಎಂದು ಪ್ರಶ್ನಿಸಿದರು.

ಮಾಜಿ ಡಿಸಿಎಂ ಮತ್ತು ಶಾಸಕ ಡಾ.ಸಿ. ಎನ್.ಅಶ್ವತ್ಥನಾರಾಯಣ್ ಅವರು ಮಾತನಾಡಿ, ಕಾಂಗ್ರೆಸ್ ಸರಕಾರಕ್ಕೆ ಆತ್ಮಸ್ಥೈರ್ಯ- ಸ್ವಾಭಿಮಾನ ಇಲ್ಲ ಎಂದು ಟೀಕಿಸಿದರು. ತೆರವಾದ ಬಾಂಗ್ಲಾದೇಶೀಯರಿಗೆ 24 ಗಂಟೆಯೊಳಗೆ ಮನೆ ಕೊಡುವುದಾಗಿ ತಿಳಿಸಿದೆ. ಇದೊಂದು ಅನೈತಿಕ, ಕಾನೂನು ವಿರೋಧದ ಕ್ರಮ ಎಂದು ಆಕ್ಷೇಪಿಸಿದರು.

## ಸುದೀರ್ಘ ಅವಧಿಗೆ ಸಿಎಂ ಎಂಬ ದಾಖಲೆ: ಜನರ ಆಶೀರ್ವಾದಿಂದ ಸಾಧ್ಯವಾಗಿದೆ- ಸಿಎಂ



**ಮೈಸೂರು:** ಮಾಜಿ ಸಿಎಂ ದಿವಂಗತ ದೇವರಾಜ್ ಅರಸ್ ಅವರ ಮುಖ್ಯಮಂತ್ರಿಯ ಸುದೀರ್ಘ ಅವಧಿಯ ದಾಖಲೆ ಮುರಿದಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಜನರ ಆಶೀರ್ವಾದದಿಂದ ಇದು ಸಾಧ್ಯವಾಗಿದೆ ಎಂದು ತಿಳಿಸಿದರು. ಮೈಸೂರಿನ ವಿಮಾನ ನಿಲ್ದಾಣದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು.

ಮಾಜಿ ಸಿಎಂ ದಿವಂಗತ ದೇವರಾಜ್ ಅರಸ್ ಅವರ ಮುಖ್ಯಮಂತ್ರಿಯ ಸುದೀರ್ಘ ಅವಧಿಯ ದಾಖಲೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನಾಳೆ ಮುರಿಯಲಿರುವ ಬಗ್ಗೆ ಮಾಧ್ಯಮದವರ ಪ್ರಶ್ನೆಗೆ ಪ್ರತಿಕ್ರಿಯೆ ನೀಡಿ, ಜನರ ಆಶೀರ್ವಾದದಿಂದ ಇದು ಸಾಧ್ಯವಾಗಿದೆ. ಅರಸು ರವರು ಮೈಸೂರಿನವರೇ ಆಗಿರುವುದು ಸಂತೋಷದ ಸಂಗತಿ. ತಾಲ್ಲೂಕು ಬೋರ್ಡ್ ಸದಸ್ಯನಾದ ನಂತರದ ನನ್ನ ರಾಜಕೀಯ ಜೀವನದಲ್ಲಿ ಸಚಿವನಾಗುವ ಮತ್ತು ಮುಖ್ಯಮಂತ್ರಿಯಾಗುವ ನಿರೀಕ್ಷೆಯಿರಲಿಲ್ಲ. 13 ಚುನಾವಣೆಗಳನ್ನೂ ಎದುರಿಸಿ 8ಕ್ಕೂ ಹೆಚ್ಚು ಬಾರಿ ಗೆಲುವು ಸಾಧಿಸಿದ್ದೇನೆ ಎಂದರು.

ಕಡಿಮೆ ಜನಸಂಖ್ಯೆಯ ಅರಸು ಸಮುದಾಯದವರಾಗಿದ್ದ ದೇವರಾಜ ಅರಸು ಅವರು ಜನಪ್ರಿಯ ನಾಯಕರಾಗಿದ್ದರು. ಅಂತಹ ಮಹಾನ್ ನಾಯಕನಿಗೂ ಮತ್ತು ನನಗೂ ಹೋಲಿಕೆ ಸರಿಯಲ್ಲ. ಅರಸು ಅವರ ಅವಧಿಯಲ್ಲಿ ರಾಜ್ಯದ ಪರಿಸ್ಥಿತಿ ವಿಭಿನ್ನವಾಗಿತ್ತು. ಅವರು ಒಂದು ಬಾರಿ ಚುನಾವಣೆಯನ್ನು ಸರ್ವಾನುಮತದಿಂದಲೂ ಆಯ್ಕೆಯಾಗಿದ್ದರು. ದಾಖಲೆಗಳು ಮುರಿಯಲೆಂದೇ ನಿರ್ಮಾಣ ವಾಗುತ್ತವೆ. ಪ್ರಸ್ತುತ ನಾನು ಪೂರೈಸಲಿರುವ ಅವಧಿಯನ್ನು ಮೀರಲಿರುವ ಮತ್ತೊಬ್ಬ ನಾಯಕರೂ ಬರಬಹುದು. ನನಗಿಂತ ಹೆಚ್ಚಿನ ಬಾರಿ ಬಜೆಟ್ ಮಂಡಿಸುವ ನಾಯಕರೂ ಮುಂದೆ ಬರಬಹುದು. ಸಾಧನಾ ಸಮಾವೇಶ ಆಯೋಜಿಸುವ ಬಗ್ಗೆ ನಿರ್ಧಾರ ಕೈಗೊಂಡಿಲ್ಲ ಎಂದರು.

ಬಜೆಟ್ ತಯಾರಿಯನ್ನು ಸಂಕ್ರಾಂತಿಯ ನಂತರ ಪ್ರಾರಂಭಿಸಲಾಗುವುದು. ಸಂಪುಟ ಪುನರ್‌ರಚನೆಯ ಬಗ್ಗೆ ಕಾಂಗ್ರೆಸ್ ವರಿಷ್ಠರಾದ ರಾಹುಲ್ ಗಾಂಧಿಯವರೊಂದಿಗೆ ಚರ್ಚಿಸಲಾಗುವುದು. ಅವರು ಸಮಯ ನೀಡಿದರೆ ಚರ್ಚಿಸಲಿರುವುದಾಗಿ ತಿಳಿಸಿದರು.

ಬಳ್ಳಾರಿ ನಡೆದ ಸಂಘರ್ಷದಲ್ಲಿ ಕಾಂಗ್ರೆಸ್ ಕಾರ್ಯಕರ್ತ ಬಲಿಯಾಗಿರುವ ಘಟನೆಯ ತನಿಖೆಯನ್ನು ಸಿಐಡಿ ಗೆ ವಹಿಸಲಾಗುವುದೇ ಎಂಬ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿ, ಈ ಬಗ್ಗೆ ಗೃಹ ಸಚಿವರೊಂದಿಗೆ ಚರ್ಚಿಸುತ್ತೇನೆ. ಪೊಲೀಸ್ ತನಿಖೆಯ ನಂತರ ಘಟನೆಯ ಸತ್ಯಾಸತ್ಯತೆ ತಿಳಿಯಲಿದೆ ಎಂದರು.

ಜಿಎಸ್ ಟಿ ಕಡಿತ, ವಿಬಿ ಜಿ ರಾಮ್ ಜಿ ಯೋಜನೆ ಜಾರಿಯಂತಹ ಕೇಂದ್ರದ ಕ್ರಮಗಳ ಬಗ್ಗೆ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡುತ್ತಾ, ರಾಜ್ಯಕ್ಕೆ ಜಿಎಸ್ ಟಿ ಯಿಂದ ವಾರ್ಷಿಕವಾಗಿ 12 ರಿಂದ 15 ಸಾವಿರ ಕೋಟಿ ರೂ.ಗಳು ನಷ್ಟವಾಗುತ್ತಿದ್ದು, ಇದು ಕೇಂದ್ರ ಸರ್ಕಾರ ರಾಜ್ಯಕ್ಕೆ ಮಾಡುತ್ತಿರುವ ಅನ್ಯಾಯ. ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರ ಕಾಲದಿಂದಲೂ ಮ ನರೇಗಾ ಯೋಜನೆಗೆ ಸಂಪೂರ್ಣವಾಗಿ ಕೇಂದ್ರವೇ ಅನುದಾನ ನೀಡುತ್ತಿತ್ತು. ಆದರೆ ಈಗ ಈ ಯೋಜನೆಯನ್ನು ರದ್ದುಪಡಿಸಿದ್ದು, ಇದರಿಂದ ಕಾರ್ಮಿಕರು, ಸಣ್ಣರೈತರು,ಮಹಿಳೆಯರು, ದಲಿತರು, ಹಿಂದುಳಿದವರು, ಅಲ್ಪಸಂಖ್ಯಾತರು, ಬಡವರಿಗೆ ನೀಡಲಾಗುತ್ತಿದ್ದ ಕೆಲಸದ ದಿನಗಳನ್ನು ಕಡಿಮೆಯಾಗಲಿದ್ದು, ಜನರ ಮೂಲಭೂತ ಹಕ್ಕಿಗಳನ್ನು ಕಸಿದುಕೊಳ್ಳಲಾಗುತ್ತಿದೆ. ಇದು ಅಸಂವಿಧಾನಿಕ ಕ್ರಮ. ಈ ಕಾಯ್ದೆಯಂತೆ ಕಾಮಗಾರಿಗಳಿಗೆ ಕೇಂದ್ರ ಮತ್ತು ರಾಜ್ಯ 60:40 ರಷ್ಟು ಅನುದಾನವನ್ನು ನೀಡಬೇಕಾಗಿದೆ. ಇದರಿಂದ ರಾಜ್ಯಸರ್ಕಾರದ ಮೇಲೆ ಸುಮಾರು 3000 ಕೋಟಿ ರೂ.ಗಳ ಹೊರೆ ಬೀಳಲಿದೆ ಎಂದರು.

ಮೈಸೂರಿನ ವಿಮಾನ ನಿಲ್ದಾಣದಲ್ಲಿ ಹುಲಿ ಕಾಣಿಸಿಕೊಳ್ಳುತ್ತಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ಈ ಬಗ್ಗೆ ನಾಳೆ ಅರಣ್ಯ ಇಲಾಖೆಯೊಂದಿಗೆ ಸಭೆ ನಿಗದಿಯಾಗಿದೆ. ರಾಜ್ಯದಲ್ಲಿ ಹುಲಿಗಳ ಸಂಖ್ಯೆ ಗಣನೀಯವಾಗಿ ಹೆಚ್ಚಿದ್ದು, ಅರಣ್ಯಗಳಿಂದ ಜನರ ಪ್ರದೇಶದಲ್ಲಿ ಕಾಣಿಸಿಕೊಳ್ಳುತ್ತಿದೆ. ಹುಲಿಯನ್ನು ಸೆರೆಹಿಡಿಯಲು ಸಿಬ್ಬಂದಿ ಕ್ರಮಕೈಗೊಳ್ಳಲು ಸೂಚನೆ ನೀಡಲಾಗಿದ್ದು, ಸೆರೆಹಿಡಿದ ಹುಲಿಗಳನ್ನು ಮತ್ತೊಂದು ಅರಣ್ಯ ಪ್ರದೇಶಕ್ಕೆ ವರ್ಗಾಯಿಸಲು ಸೂಚಿಸಲಾಗಿದೆ ಎಂದರು.

## ಅಂಗಡಿ ಮುಂದೆ ಎಣ್ಣೆ ಕದ್ದೊಯ್ದ ಕಳ್ಳರು



### ಮೊಪೆಡ್‌ನಲ್ಲಿ ಬಂದ ಇಬ್ಬರು ಕಳ್ಳರ ಕೃತ್ಯ, ಸಿಸಿ ಕ್ಯಾಮೆರಾದಲ್ಲಿ ದಾಖಲು

**ನೆಲಮಂಗಲ:** ಟೌನ್ ಪೊಲೀಸ್ ಠಾಣಾ ವ್ಯಾಪ್ತಿಯ ಪೇಟೆ ಬೀದಿಯ ಎನ್.ಆರ್. ಎಂಟರ್‌ಪ್ರೈಸಸ್ ಹೋಲ್‌ಸೇಲ್ ಅಂಗಡಿಯಲ್ಲಿ ಕಳ್ಳತನ ನಡೆದಿರುವುದು ಬೆಳಕಿಗೆ ಬಂದಿದೆ. ಮೊಪೆಡ್ ಬೈಕ್‌ನಲ್ಲಿ ಬಂದಿದ್ದ ಇಬ್ಬರು ಕಳ್ಳರು, ಗ್ರಾಹಕರಿಗೆ ವಿತರಿಸಲು ಅಂಗಡಿಯ ಮುಂದೆ ಇಡಲಾಗಿದ್ದ ಸನ್‌ಪ್ಯೂರ್ ಎಣ್ಣೆ ಟಿನ್‌ಗಳನ್ನು ಕೆಲವೇ ಕ್ಷಣಗಳಲ್ಲಿ ಕದ್ದೊಯ್ದಿದ್ದಾರೆ.

ಕಳ್ಳತನದ ಸಂಪೂರ್ಣ ದೃಶ್ಯ ಅಂಗಡಿಯ ಸಿಸಿ ಕ್ಯಾಮೆರಾದಲ್ಲಿ ದಾಖಲಾಗಿದ್ದು, ದೃಶ್ಯಾವಳಿಗಳ ಆಧಾರದಲ್ಲಿ ಆರೋಪಿಗಳ ಪತ್ತೆಗೆ ಪೊಲೀಸರು ಕ್ರಮ ಕೈಗೊಂಡಿದ್ದಾರೆ. ಘಟನೆ ಹಿನ್ನೆಲೆಯಲ್ಲಿ ವ್ಯಾಪಾರಿಗಳು ಹಾಗೂ ಸಾರ್ವಜನಿಕರು ಅಂಗಡಿಗಳ ಮುಂದೆ ಅಥವಾ ವಾಹನಗಳಲ್ಲಿ ದುಬಾರಿ ವಸ್ತುಗಳನ್ನು ಇಟ್ಟು ನಿರ್ಲಕ್ಷ್ಯ ವಹಿಸದಂತೆ ಪೊಲೀಸರು ಎಚ್ಚರಿಕೆ ನೀಡಿದ್ದಾರೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ದಿಡೀರ್ ದೇವೆಗೌಡರ ಭೇಟಿಗೆ ತೆರಳಿದ ಮಾಜಿ ಶಾಸಕ ಶ್ರೀನಿವಾಸಮೂರ್ತಿ



**ನೆಲಮಂಗಲ:** ವಿಧಾನಸಭಾ ಕ್ಷೇತ್ರದಲ್ಲಿ ಇತ್ತೀಚೆಗೆ ನಡೆಯುತ್ತಿರುವ ರಾಜಕೀಯ ಬೆಳವಣಿಗಗಳಿಂದ ಆತಂಕಕ್ಕೀಡಾಗಿರುವ ಮಾಜಿ ಶಾಸಕ ಶ್ರೀನಿವಾಸಮೂರ್ತಿ ದಿಡೀರನೇ ತನ್ನ ಬೆಂಬಲಿಗರೊಂದಿಗೆ ದೌಡಾಯಿಸಿ ಮಾಜಿ ಪ್ರಧಾನಿ, ಜೆಡಿಎಸ್ ವರೀಷ್ಠರಾದ ಹೆಚ್.ಡಿ ದೇವೆಗೌಡರನ್ನು

**ಸಾಕಷ್ಟು ಕುತೂಹಲಕ್ಕೆ ಕಾರಣವಾದ ದೇವೆಗೌಡರ ಭೇಟಿ: ರಾಜಕೀಯ ಬೆಳವಣಿಗೆಯಿಂದ ಮಾಜಿ ಶಾಸಕರು ವಿಚಲಿತ!?**

ಭೇಟಿಯಾಗಿದ್ದಾರೆ ಎಂದು ರಾಜಕೀಯ ವಲಯದಲ್ಲಿ ಸಾಕಷ್ಟು ಕುತೂಹಲಕ್ಕೆ ಕಾರಣವಾಗಿದೆ.

ಇತ್ತೀಚೆಗೆ ಮಾಜಿ ಎಂಎಲ್‌ಸಿ ಬಿಎಂಎಲ್ ಕಾಂತರಾಜು ಹುಟ್ಟುಹಬ್ಬಕ್ಕೆ ಮನೆಗೆ ತೆರಳಿ ಮಾಜಿ ಶಾಸಕ ಶ್ರೀನಿವಾಸಮೂರ್ತಿ ಶುಭಕೋರಿದ್ದರು. ಈ ವಿಚಾರ ರಾಜಕೀಯ ವಲಯದಲ್ಲಿ ಸಾಕಷ್ಟು ಚರ್ಚೆ ಹಾಗೂ ಟೀಕೆಗೆ ಕಾರಣವಾಗಿತ್ತು, ಅಲ್ಲದೆ ಜೆಡಿಎಸ್ ಪಕ್ಷದ ಕಾರ್ಯಕರ್ತರು ತಮ್ಮ ಪಕ್ಷದ ವಾಟ್ಸ್-ಆಪ್ ಗ್ರೂಪಿನಲ್ಲಿ ಸಾಕಷ್ಟು ಆಕ್ರೋಶ ಹೊರಹಾಕಿದ್ದರು.

ಜನ ಬದಲಾವಣೆ ಬಯಸುತ್ತಿದ್ದಾರೆ ಕ್ಷೇತ್ರಕ್ಕೆ ನೂತನ ಮಹಿಳಾ ಅಭ್ಯರ್ಥಿ ಆಗಮನವಾಗಲಿದೆ ಎನ್ನುವ ಸುದ್ದಿ ಎಲ್ಲೆಡೆ ಹರಿದಾಡಿದ ಪರೀಣಾಮ ಮಾಜಿ ಶಾಸಕ ಶ್ರೀನಿವಾಸ ಮೂರ್ತಿ ಅವರು ವಿಚಲಿತರಾಗಿ ಇಂದು ದೇವೆಗೌಡರನ್ನು ಭೇಟಿಯಾಗಿದ್ದಾರೆ ಎಂದು ರಾಜಕೀಯ ವಲಯದಲ್ಲಿ ಗುಸು ಗುಸು ಚರ್ಚೆ ಶುರುವಾಗಿದೆ ಎನ್ನಲಾಗುತ್ತಿದೆ.

ಮಾಜಿ ಶಾಸಕ ಶ್ರೀನಿವಾಸಮೂರ್ತಿ ಜತೆಗೆ ಕಸಬಾ ಅಧ್ಯಕ್ಷ ರಮೇಶ್ ವಿ.ಹೆಚ್, ನಗರಸಭೆ ಸದಸ್ಯ ಸುನೀಲ್ ಮೂಡದ, ಶಿವಕುಮಾರ್ ಸೇರಿದಂತೆ ಹಲವರು ಇದ್ದರು

# ನೇಕಾರರ ಪ್ರತಿಭಟನೆಗೆ ಮಿಶ್ರ ಪ್ರತಿಕ್ರಿಯೆ



ದೊಡ್ಡಬಳ್ಳಾಪುರ : ಸೋಮವಾರ ಬೆಳಗ್ಗೆ 6 ಸಂಜೆ 6 ಗಂಟೆವರೆಗೆ ಸ್ವಯಂಪ್ರೇರಿತ ಬಂದ್ ಗೆ ಕರೆ ನೀಡಲಾಗಿತ್ತು. ಕರ್ನಾಟಕ ರಾಜ್ಯ ನೇಕಾರರ ಹಿತರಕ್ಷಣಾ ಸಮಿತಿ (ರಿ.)ದೊಡ್ಡಬಳ್ಳಾಪುರ ಟೆಕ್ಸ್‌ಟೈಲ್ ವೀವರ್ಸ್ ಅಸೋಸಿಯೇಷನ್, ನೇಕರರ ಹೋರಾಟ ಸಮಿತಿ, ಕೂಲಿ ನೇಕಾರರ ಹಿತರಕ್ಷಣಾ ಸಮಿತಿ, ದೊಡ್ಡಬಳ್ಳಾಪುರ ಎಲ್ಲಾ ನೇಕಾರ ಸಂಘಟನೆಗಳು ಮತ್ತು ಸಹಕಾರಿ ಸಂಘಗಳ ಸಹಕಾರದೊಂದಿಗೆ ಬಂದ್ ಯಶಸ್ವಿಯಾಗಿ ನಡೆಯಿತು. ಶೇ. 90ರಷ್ಟು ಅಂಗಡಿ ಮುಂಗಟ್ಟುಗಳು ಮುಚ್ಚಿದ್ದವು.

ಜನರ ಸಂಖ್ಯೆಯೂ ಕಡಿಮೆ ಆಗಿತ್ತು. ವಾಹನ ಸಂಚಾರ ವಿರಳವಾಗಿತ್ತು. ನೇಕಾರಿಕೆ ದೊಡ್ಡ ಬಳ್ಳಾಪುರದ ಜೀವನಾಡಿ ಗುಡಿ ಕೈಗಾರಿಕೆ ಯಾಗಿದ್ದು, ಇಂದು ನೇಕಾರರು ಅಳಿವಿನ ಅಂಚಿನಲ್ಲಿದ್ದೇವೆ ಲಾಳಿ ಸಹಿತ ವಿದ್ಯುತ್ ಮಗ್ಗಗಳ ಸೀರೆಗಳನ್ನು ಮಾರಾಟ ಮಾಡಲು ಹರಸಾಹಸ ಪಡುವ ಪರಿಸ್ಥಿತಿ ಎದುರಾಗಿದೆ. ಇದಕ್ಕೆ ಮುಖ್ಯ ಕಾರಣ ಸೂರತ್ ನ ರಿಪೀಯರ್ ಮಗ್ಗದ ಸೀರೆಗಳು ಇದಕ್ಕೆ ಕಡಿವಾಣ ಹಾಕುವ ಹಾಗೂ ನೇಕಾರರ ಪರಿಸ್ಥಿತಿಯನ್ನು ಸರಕಾರಕ್ಕೆ ಮುಟ್ಟಿಸುವ ನಿಟ್ಟಿನಲ್ಲಿ ಈ ಬಂದ್ ಕರೆಯಲಾಗಿತ್ತು






Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.